## ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 521
ಸದಸ್ಯರ ಹೆಸರು : ಶ್ರೀ ಬಸವರಾಜ ಪಾಟೀಲ್ ಇಟಗಿ
(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 16.09.2021
ಉತ್ತರಿಸುವ ಸಚಿವರು : ಜಲಸಂಪನ್ಮೂಲ ಸಚಿವರು

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ರಾಯಚೂರು ಜಿಲ್ಲೆ, ದೇವದುರ್ಗ ತಾಲ್ಲೂಕಿನ ಎನ್.ಆರ್.ಬಿ.ಸಿ. ಯಿಂದ ತಾಲ್ಲೂಕಿನ ವ್ಯಾಪ್ತಿಯಲ್ಲಿರುವ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಸರ್ಕಾರದ ಮುಂದಿದೆಯೇ; | ಇದೆ. ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-2ರಡಿ ನಾರಾಯಣಪುರ ಬಲದಂಡೆ ಕಾಲುವೆ ಕಿ.ಮೀ.0.00 ರಿಂದ 95.00 ಹಾಗೂ ವಿತರಣಾ ಕಾಲುವೆ ನಂ.1 ರಿಂದ 18 ಜಾಲದಡಿ ಕೆಲವು ವಿತರಣಾ ಕಾಲುವೆ ಹಾಗೂ ಲ್ಯಾಟರಲ್‌ಗಳ ಟೇಲ್ ಆಫ್ (Gravity-flow) ಮುಖಾಂತರ ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನಡಿಯ ಜಿನ್ನಾಪುರ, ದೇವದುರ್ಗ (ಚಂದನಕೆರೆ), ರಾಮದುರ್ಗ, ಸಂಕೇಶ್ವರಹಾಳ, ಮಸರಕಲ್, ಗಲಗ, ಹುಲಿಗುಡ್ಡ, ಆಲಂಖಾನ್, ಸೂಗರಾಳ್ ಮತ್ತು ವೆಂಗಲಾಪುರ ಕೆರೆಗಳನ್ನು ತುಂಬಿಸಲಾಗುತ್ತಿದೆ. |
| ಆ | ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಸರ್ಕಾರ ಕೈಗೊಂಡ ಕ್ರಮವೇನು; ಯಾವಾಗ ಕೆರೆ ತುಂಬಿಸುವ ಯೋಜನೆಯನ್ನು ಜಾರಿಗೊಳಿಸಲಾಗುವುದು? | ಮುಂದುವರೆದು, ನಾರಾಯಣಪುರ ಬಲದಂಡೆ ಕಾಲುವೆ ಅಚ್ಚುಕಟ್ಟು ಪ್ರದೇಶದಲ್ಲಿ ಕಾಲುವೆಯ ಸಿ.ಬಿ.ಎಲ್. ಮಟ್ಟಕ್ಕಿಂತ ಎತ್ತರದಲ್ಲಿ ಬರುವ ದೇವದುರ್ಗ ತಾಲ್ಲೂಕಿನ 28 ಕೆರೆಗಳಿಗೆ ಕೃಷ್ಣಾ ನದಿ ಪಾತ್ರದಲ್ಲಿ ಲಿಫ್ಟ್ ಮುಖಾಂತರ ನೀರು ತುಂಬಿಸುವ ಯೋಜನೆಗೆ ರೂ.330.00 ಕೋಟಿ ಮೊತ್ತದ ಅಂದಾಜು ಪ್ರಸ್ತಾವನೆ ತಯಾರಿಸಿದ್ದು, ಕೃಷ್ಣಾ ಭಾಗ್ಯ ಜಲ ನಿಗಮದ ದಿನಾಂಕ:05/10/2020 ರಂದು ಜರುಗಿದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಸರ್ಕಾರದ ಆಡಳಿತಾತ್ಮಕ ಅನುಮೋದನೆ ಪಡೆಯಲು ತಿರುವಳಿ ನೀಡಿದ್ದು, ಪ್ರಸ್ತಾವನೆಯು ಪರಿಶೀಲನೆ ಹಂತದಲ್ಲಿರುತ್ತದೆ. |

ಸಂಖ್ಯೆ:ಜಸಂಇ 203 ಕಬಿಎನ್ 2021

(ಗೋವಿಂದ ಎಂ.ಕಾರಜೋಳ)
ಜಲ ಸಂಪನ್ಮೂಲ ಸಚಿವರು